# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1191 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 07.03.2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತು ಎಷ್ಟು ವರ್ಷಗಳಾಗಿವೆ ಹಾಗೂ ಕೇಂದ್ರ ಸರ್ಕಾರದಿಂದ ಇಲ್ಲಿಯವರಗೆ ಬಂದಿರುವ ಅನುದಾನವೆಷ್ಟು; ಇದಕ್ಕೆ ಸರಿಸಮನಾಗಿ ರಾಜ್ಯ ಸರ್ಕಾರ ನೀಡಿರುವ ಅನುದಾನವೆಷ್ಟು? | • ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ದೊರೆತು 14 ವರ್ಷಗಳಾಗಿವೆ.<br>• 2008ರಲ್ಲಿ ಕನ್ನಡ ಶಾಸ್ತ್ರೀಯ ಭಾಷೆ ಎಂದು ಘೋಷಿತವಾದ ಮೇಲೆ ಶಾಸ್ತ್ರೀಯ ಭಾಷೆಯ ಅಧ್ಯಯನಕ್ಕೆ ಇದುವರೆಗೆ ಕೇಂದ್ರದಿಂದ ವರ್ಷಾವಾರು ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.<br><br>ವರ್ಷಾವಾರು — ಅನುದಾನದ ಮೊತ್ತ<br>2011-12 — 54,54,000<br>2012-13 — 2,18,00,000<br>2013-14 — 2,18,00,000<br>2014-15 — 1,00,00,000<br>2015-16 — 1,00,00,000<br>2016-17 — 1,00,00,000<br>2017-18 — 1,00,00,000<br>2018-19 — 99,00,000<br>2019-20 — 1,03,00,000<br>2020-21 — 1,27,50,000 |
| ಆ) | ಕನ್ನಡ ಶಾಸ್ತ್ರೀಯ ಅಧ್ಯಯನ ಕೇಂದ್ರಕ್ಕೆ ಸ್ವಾಯತತ್ತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೂ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | • ಹೌದು<br><br>• ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರಕ್ಕೆ ಅನುದಾನ ನೀಡುವಂತೆ ಹಾಗೂ ಎಂ.ಓ.ಯು ಗೆ ಅನುಮತಿ ಕೋರಿ ಸಿ.ಐ.ಐ.ಎಲ್ ನ ನಿರ್ದೇಶಕರು ದಿನಾಂಕ:02.06.2020ರಂದು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಹಾಗೂ ಅಭಿವೃದ್ಧಿ ಸಚಿವಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. |

---2/-

| | | |
|---|---|---|
| | | • ಇಲಾಖಾ ಸಚಿವರ ಮುಖಾಂತರ ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರಕ್ಕೆ ಅನುದಾನ ನೀಡುವಂತೆ ದಿನಾಂಕ:08.06.2020ರಂದು ಮತ್ತು ದಿನಾಂಕ:19.01.2022ರಂದು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಹಾಗೂ ಅಭಿವೃದ್ಧಿ ಸಚಿವಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.<br>• ಸದರಿ ಪ್ರಸ್ತಾವನೆಗಳಿಗೆ ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗೆ ತಿಳಿಸಿದೆ ಎಂದು ಕೇಂದ್ರ ಸರ್ಕಾರದ ಪತ್ರದಲ್ಲಿ ತಿಳಿಸಿರುತ್ತಾರೆ. |
| ಇ) | ಕೇಂದ್ರ ಸರ್ಕಾರ ಕನ್ನಡದ ಬಗ್ಗೆ ನಿರ್ಲಕ್ಷ್ಯ ತೋರುತ್ತಿರುವ ಆರೋಪದ ನಡುವೆಯೇ ರಾಜ್ಯ ಸರ್ಕಾರ ಕೂಡ ಸ್ವಾಯತತ್ತೆ ಪಡೆಯುವ ಗಂಭೀರ ಪ್ರಯತ್ನವನ್ನೇ ಮಾಡದೆ ರಾಜ್ಯ ಸರ್ಕಾರ ಸೂಕ್ತ ರೀತಿಯಲ್ಲಿ ಸಲ್ಲಿಸಿದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರ ತಿರಸ್ಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಈ) | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಕಸಂವಾ 30 ಕೆಓಎಲ್ ಆಕ 2022.

**(ವಿ.ಸುನಿಲ್ ಕುಮಾರ್)**
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು